ಮೀನುಗಾರಿಕೆ ನೀಡುವ ಅಧಿಕಾರ ಕುರಿತು

51(133) ಶ್ರೀ ಜಯಪ್ರಕಾಶ್ ಹೆಗ್ಡೆ ಕೆ (ಬ್ರಹ್ಮಾವರ) ಮಾನ್ಯ ಮೀನುಗಾರಿಕೆ ಮತ್ತು ಮುಜರಾಯಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ,

ಅ) ರಾಜ್ಯದ ಕೆರೆಗಳಲ್ಲಿ ಒಳನಾಡು ಮೀನುಗಾರಿಕೆಗೆ ಅವಕಾಶ ನೀಡಲಾಗಿದೆಯೇ ,

ಆ) ಒಳನಾಡು ಮೀನುಗಾರಿಕೆಯ ಹಕ್ಕು ಯಾವ ಇಲಾಖೆಯ ವ್ಯಾಪ್ತಿಗೆ ಬರುತ್ತದೆ ,

ಇ) ಬೆಂಗಳೂರು ನಗರದ ಕೆರೆಗಳಲ್ಲಿ ಮೀನುಗಾರಿಕೆಯನ್ನು ಕೆರೆ ಅಭಿವೃದ್ಧಿ ಪ್ರಾಧಿಕಾರದವರು ಅಡಚಣೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

ಶ್ರೀ ಬಿ ನಾಗರಾಜ ಶೆಟ್ಟಿ (ಮೀನುಗಾರಿಕೆ ಮತ್ತು ಮುಜರಾಯಿ ಸಚಿವರು)

ಅ) ರಾಜ್ಯದ ಕೆರೆಗಳಲ್ಲಿ ಒಳನಾಡು ಮೀನುಗಾರಿಕೆಗೆ ಅವಕಾಶ ನೀಡಲಾಗಿದೆ ರಾಜ್ಯದಲ್ಲಿ 3291 ಇಲಾಖಾ ವ್ಯಾಪ್ತಿಯ ಕೆರೆಗಳು, 74 ಜಲಾಶಯಗಳು ಹಾಗೂ 5813 ಕಿ ಮೀ ಉದ್ದದ ನದಿಗಳು ಇರುತ್ತವೆ ಮತ್ತು 22,624 ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕೆರೆಗಳು ಇರುತ್ತವೆ ಈ ಒಳನಾಡು ಜಲಸಂಪನ್ಮೂಲಗಳಲ್ಲಿ ಮೀನುಗಾರಿಕೆಗೆ ಅವಕಾಶ ನೀಡಲಾಗಿದೆ

ಆ) 40 ಹೆಕ್ಟೇರ್ ಮೇಲ್ಪಟ್ಟು ಅಚ್ಚುಕಟ್ಟು ಹೊಂದಿರುವ ರಾಜ್ಯದ ಎಲ್ಲಾ ಕೆರೆಗಳ - (ಸಂಖ್ಯೆ–3291) ಮೀನುಗಾರಿಕೆ ಅಭಿವೃದ್ಧಿಪಡಿಸುವ ಹಕ್ಕು ಮೀನುಗಾರಿಕೆ ಇಲಾಖೆಯ ವ್ಯಾಪ್ತಿಗೆ ಬರುತ್ತವೆ 40 ಹೆಕ್ಟೇರ್‌ಗಿಂತ ಕಡಿಮೆ ಅಚ್ಚುಕಟ್ಟು ಪ್ರದೇಶವುಳ್ಳ ಎಲ್ಲಾ ಕೆರೆಗಳು (ಸಂಖ್ಯೆ–22,624) ಸಂಬಂಧಪಟ್ಟ ಗ್ರಾಮ ಪಂಚಾಯತ್ ವ್ಯಾಪ್ತಿಗೆ ಬರುತ್ತದೆ

ಇ) ಬೆಂಗಳೂರು ನಗರ ವ್ಯಾಪ್ತಿಯ ಕೆರೆಗಳಲ್ಲಿ ಮೀನುಗಾರಿಕೆ ಮಾಡಲು ಕೆರೆ ಅಭಿವೃದ್ಧಿ ಪ್ರಾಧಿಕಾರದಿಂದ ಕೆರೆಯನ್ನು ಗುತ್ತಿಗೆಗೆ ಪಡೆದ ಖಾಸಗಿ ಬಂಡವಾಳವಾರು ಸಂಸ್ಥೆಯು ಅಡಚಣೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆ ಕೆರೆ ಅಭಿವೃದ್ಧಿ ಪ್ರಾಧಿಕಾರದಿಂದ ಕೆರೆ ಅಭಿವೃದ್ಧಿ ಕಾರ್ಯವನ್ನು ಪಡೆದ ಖಾಸಗಿ ಬಂಡವಾಳದಾರ ಸಂಸ್ಥೆಗಳು ಆ ಕೆರೆಗಳಲ್ಲಿ ಮೀನುಗಾರಿಕೆ ನಡೆಸಲು ವಿರೋಧ ವ್ಯಕ್ತಪಡಿಸಿದ್ದರಿಂದ, ದಿನಾಂಕ 14 12 2006 ರಂದು ಮಾನ್ಯ ಮೀನುಗಾರಿಕೆ ಮತ್ತು ಮುಜರಾಯಿ ಸಚಿವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಕೆರೆಯ ಅಭಿವೃದ್ಧಿ ವಿಷಯವನ್ನು ಸಮಗ್ರವಾಗಿ ಚರ್ಚಿಸಿ, ಕೆರೆಗಳ ಮೀನು ಪಾಶುವಾರು ಹಕ್ಕನ್ನು ಮೀನುಗಾರಿಕೆ ಇಲಾಖೆಯೇ ನಿರ್ವಹಿಸಿಕೊಂಡು ಹೋಗಲು ಮತ್ತು ಆಯ್ದ ಕೆರೆಗಳ ಸಂರಕ್ಷಣೆ ಹಾಗೂ ಅಭಿವೃದ್ಧಿ ಕಾರ್ಯಗಳನ್ನು ಮೀನುಗಾರಿಕೆ ಇಲಾಖೆ

ಕೈಗೊಳ್ಳುವುದು ಸೂಕ್ತವೆಂದು ತೀರ್ಮಾನಿಸಲಾಗಿದ್ದು, ಇದನ್ನು ಕೆರೆ ಅಭಿವೃದ್ಧಿ ಪ್ರಾಧಿಕಾರಕ್ಕೆ ತಿಳಿಯಪಡಿಸಲಾಗಿದೆ ಈ ಬಗ್ಗೆ ಮುಂದಿನ ಬೆಳವಣಿಗೆಯನ್ನು ನಿರೀಕ್ಷಿಸಲಾಗಿದೆ

ಶ್ರೀ ಕೆ ಜಯಪ್ರಕಾಶ್ ಹೆಗ್ಡೆ ಮಾನ್ಯ ಅಧ್ಯಕ್ಷರೆ, ಸರ್ಕಾರದಿಂದ ಉತ್ತರವನ್ನು ಕೊಟ್ಟಿದ್ದಾರೆ ಅವರು ಉತ್ತರದಲ್ಲಿ ಕೆರೆ ಅಭಿವೃದ್ಧಿ ಪ್ರಾಧಿಕಾರದವರು ಮೀನುಗಾರರಿಗೆ ತೊಂದರೆಯನ್ನು ಕೊಡುವುದು ಸರ್ಕಾರದ ಗಮನಕ್ಕೆ ಬಂದಿದೆಯೆಂದು ಕೊಟ್ಟಿದ್ದಾರೆ, ಹಾಗಾದರೆ ಅದನ್ನು ನೀವೇ ವಾಪಸ್ಸು ತೆಗೆದುಕೊಂಡು ಅಭಿವೃದ್ಧಿ ಪಡಿಸುತ್ತಿರಾ ? ಏಕೆಂದರೆ ಕೋಟ್ಯಾಂತರ ರೂಪಾಯಿಗಳನ್ನು World Bank ನಿಂದ ಅಭಿವೃದ್ಧಿ ಮಾಡಲೆಂದು ತೆಗೆದುಕೊಂಡಿದ್ದಾರೆ ಆದರೆ ಅಲ್ಲಿರುವ weeds ಅನ್ನು ತೆಗೆಯುತ್ತಿಲ್ಲ ಈಗಾಗಲೇ ಗುತ್ತಿಗೆಯನ್ನು ಸಣ್ಣ ನೀರಾವರಿ ಇಲಾಖೆ, ಜಿಲ್ಲಾ ಪಂಚಾಯತ್‌ನಲ್ಲಿದ್ದ ಕೆರೆಗಳನ್ನು ಇಲಾಖೆಯವರೇ ಟೆಂಡರ್ ಅನ್ನು ಕರೆಯುತ್ತೀರಿ ಈಗ ಕೆರೆ ಅಭಿವೃದ್ಧಿ ಪ್ರಾಧಿಕಾರದವರು ಮೀನು ಹಿಡಿಯುವುದಕ್ಕೆ ಬಿಡುತ್ತಿಲ್ಲ ಇದರ ಬಗ್ಗೆ ತಾವು ಸಭೆಯನ್ನು ಮಾಡಿ, ಮುಂದಿನ ತೀರ್ಮಾನ ಮಾಡುವುದಾಗಿ ಹೇಳಿದ್ದೀರಿ ತಾವು ಅರಣ್ಯ ಸಚಿವರನ್ನು ಕರೆದು ಫೈನಲ್ ತೀರ್ಮಾನವನ್ನು ತೆಗೆದುಕೊಂಡು, ತಮ್ಮ ಇಲಾಖೆಯಲ್ಲಿ ಇಟ್ಟುಕೊಂಡು ಮೀನುಗಾರರಿಗೆ ತೊಂದರೆಯಾಗದ ಹಾಗೆ ನೋಡಿಕೊಳ್ಳಬೇಕೆಂದು ನಾನು ತಮ್ಮನ್ನು ಕೇಳಿಕೊಳ್ಳುತ್ತೇನೆ

ಶ್ರೀ ಬಿ ನಾಗರಾಜ ಶೆಟ್ಟಿ ಮಾನ್ಯ ಅಧ್ಯಕ್ಷರೆ, ಮಾನ್ಯ ಸದಸ್ಯರು ಬಹಳ ಒಳ್ಳೆಯ ವಿಚಾರವನ್ನು ತಿಳಿಸಿದ್ದಾರೆ ಈ ವಿಚಾರ ಈಗಾಗಲೇ ನಮ್ಮ ಗಮನಕ್ಕೆ ಬಂದಿದೆ ಈ ಕೆರೆ ಅಭಿವೃದ್ಧಿ ಪ್ರಾಧಿಕಾರರವರು Lake Authority of India ದವರು ನಮ್ಮ ಬೆಂಗಳೂರು ನಗರದಲ್ಲಿರುಂತಹ ಕೆರೆಗಳನ್ನು ದುರಸ್ಥಿ ಮಾಡುತ್ತೇವೆಂದು ಹೇಳಿ, ಕೋಟ್ಯಾಂತರ ರೂಪಾಯಿಗಳ ಸಾಲವನ್ನು ತೆಗೆದುಕೊಂಡಿರುವ ವಿಚಾರವು ನಮ್ಮ ಗಮನಕ್ಕೆ ಬಂದಿದೆ ಆದರೆ ಮೀನು ಹಿಡಿಯುವ ವ್ಯವಸ್ಥೆಗೆ ಮೀನುಗಾರಿಕೆ ಇಲಾಖೆಗೆ ಸಂಪೂರ್ಣ ಅಧಿಕಾರ ಇರುವುದರಿಂದ ಯಾವುದೇ ತೊಂದರೆಯನ್ನು ಕೊಡಬಾರದೆಂದು ನಾನು ದಿ 14 12 2006ರಂದು ಸಭೆಯನ್ನು ಕರೆದಿದ್ದೆ ಆ ಸಭೆಯಲ್ಲಿ ಅವರು ಒಪ್ಪಿಗೆಯನ್ನು ಕೊಟ್ಟು ಹೋಗಿದ್ದಾರೆ ಅದು ಆದ ನಂತರ ಅವರು ಯಾವುದೇ ವಿಚಾರವನ್ನು ತಿಳಿಸಿಲ್ಲ ಈ ವಿಚಾರ ಸಂಬಂಧಪಟ್ಟ ಅರಣ್ಯ ಮಂತ್ರಿಯವರಿಗೆ ಬರುತ್ತದೆ ನಾನು ಈ ವಿಷಯವನ್ನು ಮಾನ್ಯ ಮುಖ್ಯಮಂತ್ರಿಯವರ ಗಮನಕ್ಕೆ ತಂದು, ಇಲ್ಲಿ ಕೆರೆಗಳು ಏನಿವೆ, ಅದನ್ನು ವಾಪಸ್ಸು ತೆಗೆದುಕೊಳ್ಳುವ ವ್ಯವಸ್ಥೆ ಆಗಬೇಕೇ ಅಥವಾ ಅದು ಅವರೇ ಮುಂದುವರೆಸಬೇಕೇ ಅದು ಏನೇ ಇದ್ದರೂ ನಮ್ಮ ಮೀನುಗಾರಿಕೆ ಇಲಾಖೆಗೆ ಸಂಬಂಧಪಟ್ಟ ವಿಚಾರದಲ್ಲಿ ನಮ್ಮ ಮೀನುಗಾರರಿಗೆ ತೊಂದರೆಯಾಗದ ಹಾಗೆ

ನೋಡಿಕೊಳ್ಳುವುದು, ನಮ್ಮ ಜವಾಬ್ದಾರಿಯಾಗಿದೆ ಅದಕ್ಕೆ ಬೇಕಾದ ಕ್ರಮವನ್ನು ನಾನು ತೆಗೆದುಕೊಳ್ಳುತ್ತೇನೆ

ಮಾನ್ಯ ಸದಸ್ಯರು ಮೀನುಗಾರರಿಗೆ ಮನೆಗಳನ್ನು ಕೊಡುವ ವಿಚಾರದಲ್ಲಿ ನಮ್ಮ ಕ್ಷೇತ್ರದಲ್ಲಿ ಕೇವಲ 10 ಮನೆಗಳನ್ನು ಕೊಟ್ಟಿದ್ದಾರೆ ಬೇರೆ ಕ್ಷೇತ್ರಗಳಲ್ಲಿ 100 ಮನೆಗಳನ್ನು ಕೊಟ್ಟಿದ್ದಾರೆ ಈ ರೀತಿ ಏಕೆ ತಾರತಮ್ಯವಾಗಿದೆ ಮೀನುಗಾರರು ಎಲ್ಲರೂ ಒಂದೇ ಅಲ್ಲವೇ ?

ಶ್ರೀ ಬಿ ನಾಗರಾಜ ಶೆಟ್ಟಿ ಮಾನ್ಯ ಅಧ್ಯಕ್ಷರೆ, ಈ ಪ್ರಶ್ನೆಗೆ ಸಂಬಂಧಪಟ್ಟಿಲ್ಲ ಈ ವಿಷಯ ಬೇರೆ ಆಗಿದೆ ಇದಕ್ಕೆ ಸಂಬಂಧಪಟ್ಟಂತೆ ಪ್ರಶ್ನೆಕೇಳಿದರೆ ಉತ್ತರ ಕೊಡುತ್ತೇವೆ

ಅಧ್ಯಕ್ಷರು ಮಾನ್ಯ ಸಚಿವರ ಬಳಿ ಈಗ ಮಾಹಿತಿ ಇಲ್ಲ ತಾವು ಬೇರೆ ಪ್ರಶ್ನೆಯನ್ನು ಕಳುಹಿಸಿ, ಅಥವಾ ಮಾನ್ಯ ಮುಖ್ಯಮಂತ್ರಿಯವರ ಹತ್ತಿರ ಹೋಗಿ ಮಾತನಾಡಿ

ಹಳದಿಪಡಿತರ ಚೀಟಿ ವಿತರಣೆ

52(264) ಶ್ರೀ ಹೊನ್ನಾಳಿ ಜಬ್ಬಾರ್ ಖಾನ್ ಹಯಾತ್ ಖಾನ್ (ಹುಬ್ಬಳ್ಳಿ) ಮಾನ್ಯ ಆಹಾರ, ನಾಗರೀಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ,

ಅ) ಹುಬ್ಬಳ್ಳಿ–ಧಾರವಾಡ ಮಹಾನಗರ ಪಾಲಿಕೆ ವ್ಯಾಪ್ತಿಯ ಕಡುಬಡವರಿಗೆ, ದೀನದಲಿತರಿಗೆ, ಹಿಂದುಳಿದವರಿಗೆ ಹಳದಿ ಪಡಿತರ ಚೀಟಿ ಹಂಚುವಲ್ಲಿ ಅವ್ಯವಸ್ಥೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ,

ಆ) ಪಾಲಿಕೆ ವ್ಯಾಪ್ತಿಯಲ್ಲಿ ಹಳದಿ ಪಡಿತರ ಚೀಟಿಗಾಗಿ ಬಂದಿರುವ ಅರ್ಜಿಗಳು ಎಷ್ಟು ,

ಇ) ಹಳದಿ ಪಡಿತರ ಚೀಟಿ ನೀಡುವುದಕ್ಕೆ ಸರ್ಕಾರ ವಿಧಿಸಿರುವ ಮಾನದಂಡ ಯಾವುದು ,

ಈ) ಶ್ರೀಮಂತರಿಗೆ ಹಳದಿ ಪಡಿತರ ಚೀಟಿ, ಬಡತನ ರೇಖೆಗಿಂತ ಕೆಳಗಿರುವವರಿಗೆ ನೀಲಿ ಪಡಿತರ ಚೀಟಿ ನೀಡಿರುವುದು ಸರಿಯೇ ,

ಉ) ಈ ರೀತಿ ತಪ್ಪೆಸಗಿದ ಅಧಿಕಾರಿ ಹಾಗೂ ಸಿಬ್ಬಂದಿಗಳ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ ?

ಶ್ರೀ ಗೋವಿಂದ ಎಂ ಕಾರ್ಜೋಳ (ಆಹಾರ, ನಾಗರೀಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರು)

ಅ) ರಾಜ್ಯಾದ್ಯಂತ ಕೈಗೊಳ್ಳಲಾದ ಮನೆ ಮನೆ ಸಮೀಕ್ಷೆಯ ಪ್ರಕಾರ ಹುಬ್ಬಳ್ಳಿ ಧಾರವಾಡ ಮಹಾನಗರ ಪಾಲಿಕೆಯ ವ್ಯಾಪ್ತಿಯಲ್ಲಿಯೂ ವಿವಿಧ ವರ್ಗವಾರು ಪಡಿತರ ಚೀಟಿಗಳ ವಿತರಣೆಗೆ ಫಲಾನುಭವಿಗಳನ್ನು ಗುರುತಿಸಲಾಗಿರುತ್ತದೆ ಈ ರೀತಿ ಗುರುತಿಸಲಾದ ಫಲಾನುಭವಿಗಳಿಗೆ ಆಯಾ